ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರ:19/2024

ಚಾಸಾ:5 ಪ್ರಾಸಾ:4

ದಿನಾಂಕ: 19.09.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಜಶೇಖರ |
| ತಂದೆಯ ಹೆಸರು | : | ಶಿವರಾಮ ಶೇರಿಗಾರ |
| ವಯಸ್ಸು | : | 61 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ಮಹಜರು ಮತ್ತು ನಕ್ಷೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಯನ್ನು ನಿಪಿ-1 ಮತ್ತು ನಿಪಿ-2 ಎಂದು ಈಗಾಗಲೇ ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಮತ್ತು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ಕೆಎ-20-ಜಿ-0726 ಪೊಲೀಸ್ ಜೀಪನ್ನು ನೋಡಿ ಗುರುತಿಸಿರುವುದಿಲ್ಲ. ಸದ್ರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 13-11-2023 ರಂದು ಅಪಘಾತವಾದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನಾನು ಮತ್ತು ಚಾಸಾ-6 ರವರ ಸಮಕ್ಷಮ ಮಧ್ಯಾಹ್ನ 12 ರಿಂದ 12-45ರವರೆಗೆ ಪಂಚನಾಮೆ ಮತ್ತು ನಕ್ಷೆ ತಯಾರಿಸಿ ಪೋಟೋ ತೆಗೆದು

ವಾಹನವನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**